**ಪ್ರಧಾನ ದಿವಾನಿ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ನಂಜನಗೂಡು, ಮೈಸೂರು ಜಿಲ್ಲೆ .**

**ಸಿ.ಸಿ.ನಂ. 833/2023**

| | | |
|---|---|---|
| ಸಾಕ್ಷಿದಾರರ ಹೆಸರು | : | ಜ್ಯೋತಿ |
| ತಂದೆಯ ಹೆಸರು | : | ಮಹದೇವೇಗೌಡ |
| ವಯಸ್ಸು | : | 28 ವರ್ಷ |
| ಉದ್ಯೋಗ | : | ಅಂಗಡಿ ವ್ಯಾಪಾರ |
| ವಾಸಸ್ಥಳ | : | ಮಾದಾಪುರ, ನಂಜನಗೂಡು ತಾ. |

**ಸಾಕ್ಷಿಯನ್ನು ದಿನಾಂಕಃ 14.10.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಮಾನ್ಯ ಸ. ಸ. ಅ. ರವರಿಂದಃ**

ಚಾಸಾ–2 ನನ್ನ ಚಿಕ್ಕಪ್ಪನ ಮಗ. ಆರೋಪಿಗಳು ನಮ್ಮ ಗ್ರಾಮದ ನಿವಾಸಿಗಳಾಗಿರುತ್ತಾರೆ. ದಿನಾಂಕ 28.05.2023 ರಂದು ಸಂಜೆ 6.00 ಗಂಟೆ ಸಮಯದಲ್ಲಿ ನಾನು ಅಂಗಡಿಯಲ್ಲಿರುವಾಗ 1 ಮತ್ತು 2 ನೇ ಆರೋಪಿಗಳು ಬಂದು ನನ್ನನ್ನು ನೋಡಿ ನಿಮ್ಮ ಅಣ್ಣ ಸೂಳೆಮಗ ಎಲ್ಲಿ ಅವನನ್ನು ಕರೆ ಎಂದು ಬೈಯ್ಯುತ್ತಿದ್ದರು. ಆಗ ನಾನು ಅಂಗಡಿಯಿಂದ ಹೊರಕ್ಕೆ ಬಂದು ಏಕೆ ಈ ರೀತಿ ಬೈಯ್ಯುತ್ತಿದ್ದೀರಾ ಎಂದು ಕೇಳಿದಾಗ 1 ನೇ ಆರೋಪಿ ತನ್ನ ಕೈಯಿಂದ ನನ್ನ ಎಡ ಕಪಾಳಕ್ಕೆ ಹೊಡೆದಿರುತ್ತಾರೆ. 2 ನೇ ಆರೋಪಿ ಕೈಯಿಂದ ನನ್ನ ಮೈಗೆ ಹೊಡೆದಿರುತ್ತಾರೆ. 2 ಮತ್ತು 3 ನೇ ಆರೋಪಿಗಳು ಯಾರನ್ನು ಕೇಳಿ ಜಮೀನನ್ನು ಉಳುಮೆ ಮಾಡಿಸಿದ್ದೀರಾ ಎಂದು ಕೊಲೆ ಬೆದರಿಕೆ ಹಾಕಿರುತ್ತಾರೆ. ಆಗ ಚಾಸಾ–2 ಗಲಾಟೆ ಬಿಡಿಸಿರುತ್ತಾರೆ. ನನ್ನ ಅಣ್ಣ ಚಾಸಾ–3 ನನ್ನನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತಾರೆ. ನಾನು ಆಸ್ಪತ್ರೆಯಲ್ಲಿರುವಾಗ ಪೊಲೀಸರು ಬಂದು ನನ್ನ ಹೇಳಿಕೆ ದೂರು ಪಡೆದಿರುತ್ತಾರೆ. ಸಾಕ್ಷಿಯು ಹೇಳಿಕೆ ದೂರನ್ನು ನೋಡಿ ಗುರುತಿಸಿದ್ದರಿಂದ, ಅದನ್ನು ನಿಪಿ–1 ಎಂದು,

ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ–1(ಎ) ಎಂದು ಗುರುತಿಸಲಾಯಿತು. ನಾನು ದೂರು ಕೊಟ್ಟ ನಂತರ ಪೊಲೀಸರು ನಮ್ಮ ಮನೆಯ ಹತ್ತಿರ ಬಂದು ಮಹಜರ್ ಮಾಡಿರುತ್ತಾರೆ. ಸ್ಥಳವನ್ನು ನಾನೇ ತೋರಿಸಿರುತ್ತೇನೆ. ಆ ಸಮಯದಲ್ಲಿ ಚಾಸಾ–4 ಮತ್ತು 5 ಇದ್ದರು. ಸಾಕ್ಷಿಯು ಮಹಜರ್ ನ್ನು ನೋಡಿ ಗುರುತಿಸಿದ್ದರಿಂದ, ಅದನ್ನು ನಿಪಿ–2 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ–2(ಎ) ಎಂದು ಗುರುತಿಸಲಾಯಿತು. ನಾನು ನ್ಯಾಯಾಲಯದಲ್ಲಿ ಹೇಳಿಕೆ ನೀಡಿರುತ್ತೇನೆ. ಕಡತದಲ್ಲಿದ್ದ ಅಂಚೆ ಲಕೋಟೆಯಲ್ಲಿರುವ ಹೇಳಿಕೆ ದಾಖಲೆಯನ್ನು ತೆರೆದ ನ್ಯಾಯಾಲಯದಲ್ಲಿ ತೆಗೆದು ಸಾಕ್ಷಿಗೆ ತೋರಿಸಿ ಗುರುತಿಸುವಂತೆ ಕೇಳಿದಾಗ ಸಾಕ್ಷಿಯು ತನ್ನ ಹೇಳಿಕೆಯಾಗಿರುತ್ತದೆ ಎಂದು ನೋಡಿ ಗುರುತಿಸಿದ್ದರಿಂದ, ದಂಡ ಪ್ರಕ್ರಿಯಾ ಸಂಹಿತೆ ಕಲಂ 164 ರಡಿಯ ಹೇಳಿಕೆ ದಾಖಲೆಯನ್ನು ನಿಪಿ–3 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ–3(ಎ) ಎಂದು ಗುರುತಿಸಲಾಯಿತು. ನಾನು ಆರೋಪಿಗಳನ್ನು ನೋಡಿದರೆ ಗುರುತಿಸುತ್ತೇನೆ. ಆರೋಪಿಗಳು ಈ ದಿನ ಗೈರುಹಾಜರಾಗಿದ್ದು, ಮಾನ್ಯ ಪ್ರತಿರಕ್ಷಣಾ ಪರ ವಕೀಲರು ಆರೋಪಿಗಳ ಗುರುತಿಸುವಿಕೆಯ ಬಗ್ಗೆ ತಕರಾರು ಇಲ್ಲವೆಂದು ಹೇಳಿದ್ದರಿಂದ, ವಿನಾಯಿತಿ ಅರ್ಜಿಯನ್ನು ಮನ್ನಿಸಲಾಯಿತು.

(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಮಾನ್ಯ ಸ.ಸ.ಅ ಕೋರಲಾಗಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)

**ಪಾಟೀಸವಾಲುಃ ಸ.ಸ.ಅ ರವರಿಂದಃ**

ದಿನಾಂಕ 28.05.2023 ರಂದು ಸಂಜೆ 6.00 ಗಂಟೆ ಸಮಯದಲ್ಲಿ 1 ಮತ್ತು 2 ನೇ ಆರೋಪಿಗಳು ನನ್ನನ್ನು ಮುಂದೆ ಹೋಗದಂತೆ ತಡೆದು ನಿಲ್ಲಿಸಿ, ಬೈದಿರುತ್ತಾರೆ ಎಂದರೆ ಸರಿ.

**ಪಾಟೀಸವಾಲುಃ ಆರೋಪಿಗಳ ಪರ ಶ್ರೀಮತಿ ಎ.ಜಿ, ವಕೀಲರಿಂದಃ** ಸಮಯ ಕೋರಿರುತ್ತಾರೆ, ಸಮಯ ನೀಡಲಾಯಿತು.

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

**ಓ ಹೇ ಕೇ ಸಾ ಸ ಇ ಒ.,**

ಸಹಿ/–

**ಪ್ರಧಾನ ದಿವಾನಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.,**

**ನಂಜನಗೂಡು.**